ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಹನ್ನೆರಡನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 28ನೇ ಮಾರ್ಚ್, 2022

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತೈದನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತೈದನೇ ಪಟ್ಟಿ

2. ವಿತ್ತೀಯ ಕಾರ್ಯಕಲಾಪ

2022-23ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಗಳ ಮೇಲೆ ನಡೆದ ಚರ್ಚೆಗೆ ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು.

ಅಭಿಯಾಚನೆ ಸಂಖ್ಯೆ	ಅಭಿಯಾಚನೆಯ ಹೆಸರು
01	ಕೃಷಿ ಮತ್ತು ತೋಟಗಾರಿಕೆ
05	ಒಳಾಡಳಿತ ಮತ್ತು ಸಾರಿಗೆ
07	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
10	ಸಮಾಜ ಕಲ್ಯಾಣ
11	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
14	ಕಂದಾಯ
20	ಲೋಕೋಪಯೋಗಿ
21	ಜಲಸಂಪನ್ಮೂಲ
23	ಕಾರ್ಮಿಕ ಮತ್ತು ಕೌಶಲ್ಯಾಭಿವೃದ್ಧಿ
08	ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ
09	ಸಹಕಾರ
13	ಆಹಾರ ಮತ್ತು ನಾಗರಿಕ ಸರಬರಾಜು
22	ಆರೋಗ್ಯ ಮತ್ತು ಕುಟುಂಬ ಕಲ್ಯಾಣ
24	ಇಂಧನ
02	ಪಶು ಸಂಗೋಪನೆ ಮತ್ತು ಮೀನುಗಾರಿಕೆ
03	ಆರ್ಥಿಕ
04	ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ
06	ಮೂಲಭೂತ ಸೌಕರ್ಯ ಅಭಿವೃದ್ಧಿ
12	ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವೆಗಳು
15	ಮಾಹಿತಿ ತಂತ್ರಜ್ಞಾನ

... 2/

16	ವಸತಿ
17	ಶಿಕ್ಷಣ
18	ವಾಣಿಜ್ಯ ಮತ್ತು ಕೈಗಾರಿಕೆ
19	ನಗರಾಭಿವೃದ್ಧಿ
25	ಕನ್ನಡ ಮತ್ತು ಸಂಸ್ಕೃತಿ
26	ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ
27	ಕಾನೂನು
28	ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ

3. ಸನ್ಮಾನ್ಯ ಸಭಾಧ್ಯಕ್ಷರಿಂದ "ಚುನಾವಣಾ ವ್ಯವಸ್ಥೆಯಲ್ಲಿ ಸುಧಾರಣೆಗಳ ಅಗತ್ಯತೆ" ಕುರಿತು ಪ್ರಾಸ್ತವಿಕ ಮಾತು

4. "ಚುನಾವಣಾ ವ್ಯವಸ್ಥೆಯಲ್ಲಿ ಸುಧಾರಣೆಗಳ ಅಗತ್ಯತೆ" ಕುರಿತು ವಿಶೇಷ ಚರ್ಚೆ

5. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಅಭಯ ಪಾಟೀಲ್ ಅವರು** – ಬೆಳಗಾವಿ ಗ್ರಾಮದಲ್ಲಿ ಕೇಂದ್ರ ರಕ್ಷಣಾ ಇಲಾಖೆಯ ವಶದಲ್ಲಿರುವ 745 ಎಕರೆ ಅಷ್ಟು ಜಮೀನನ್ನು ಬೆಳಗಾವಿಯಲ್ಲಿ ಐಟಿ ಪಾರ್ಕ್/ ಸೆಮಿ ಕಂಡಕ್ಟರ್ ಪಾರ್ಕ್ ನಿರ್ಮಿಸಲು ರಾಜ್ಯ ಸರ್ಕಾರಕ್ಕೆ ಹಸ್ತಾಂತರಿಸುವ ಪ್ರಕ್ರಿಯೆಯು ವಿಳಂಬವಾಗುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

2) **ಶ್ರೀ ಬಂಡೆಪ್ಪ ಖಾಶೆಂಪುರ ಅವರು** – ಉತ್ತರ ಕರ್ನಾಟಕದ ಸರ್ವತೋಮುಖ ಅಭಿವೃದ್ಧಿಗಾಗಿ ಸರ್ಕಾರದ ಕೆಲವು ಕಛೇರಿಗಳನ್ನು ಉತ್ತರ ಕರ್ನಾಟಕದ ವಿವಿಧ ಸ್ಥಳಗಳಿಗೆ ವರ್ಗಾಯಿಸುವಂತೆ ಆದೇಶವಾಗಿದ್ದರೂ ಸಹ ಸದರಿ ಕಛೇರಿಗಳು ಉತ್ತರ ಕರ್ನಾಟಕಕ್ಕೆ ಸ್ಥಳಾಂತರಗೊಳ್ಳದಿರುವ ಬಗ್ಗೆ ಮಾನ್ಯ ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

3) **ಶ್ರೀ ವೀರಭದ್ರಯ್ಯ (ವೀರಣ್ಣ) ಚರಂತಿಮಠ ಅವರು** – ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಥಲಸೀಮಿಯಾ ಹಾಗೂ ಹಿಮೋಫಿಲಿಯಾ ರೋಗಗಳ ಕುರಿತು ಸಮಗ್ರ ಅಧ್ಯಯನ/ಸಮೀಕ್ಷೆಗಳನ್ನು ನಡೆಸಲು ಅಗತ್ಯ ತಂತ್ರಜ್ಞಾನಗಳನ್ನು ಒದಗಿಸುವ ಬಗ್ಗೆ ಹಾಗೂ ಸರ್ಕಾರಿ ಆಸ್ಪತ್ರೆಗಳಿಗೆ ಸೀಮಿತವಾಗಿರುವ ಈಗಿನ ಯೋಜನೆಗಳನ್ನು ಖಾಸಗಿ ಆಸ್ಪತ್ರೆ, ಮೆಡಿಕಲ್ ಕಾಲೇಜುಗಳಿಗೂ ಸಹ ವಿಸ್ತರಿಸುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

4) **ಶ್ರೀಯುತರುಗಳಾದ ಡಿ.ಸಿ. ತಮ್ಮಣ್ಣ ಹಾಗೂ ಸುರೇಶ್ ಗೌಡ ಅವರುಗಳು** – ಮಂಡ್ಯ ಜಿಲ್ಲೆಯಲ್ಲಿ ರೈತರು ಮತ್ತು ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ರಸಗೊಬ್ಬರ ವಿತರಣೆಯಲ್ಲಿ ನಡೆದ ಅವ್ಯವಹಾರದ ಬಗ್ಗೆ ಹಾಗೂ ನಕಲಿ ರಸಗೊಬ್ಬರ ವಿತರಣೆಯಿಂದ ರೈತರುಗಳಿಗೆ ಅನ್ಯಾಯ ಆಗಿರುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

... 3/

5) **ಶ್ರೀ ಪ್ರಿಯಾಂಕ ಖರ್ಗೆ ಅವರು** – ಮೊರಾರ್ಜಿ ದೇಸಾಯಿ ಹಾಗೂ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳಲ್ಲಿನ ಚಿತ್ರಕಲಾ ಶಿಕ್ಷಕರ ಹುದ್ದೆಯ ನೇಮಕಾತಿ ಕುರಿತಂತೆ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಣೆ ಮಾಡದೇ ಇರುವುದರಿಂದ 5 ವರ್ಷಗಳಿಂದ ಸದರಿ ಹುದ್ದೆಗಾಗಿ ಕಾಯುತ್ತಿರುವ ಅರ್ಹ ಅಭ್ಯರ್ಥಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

6) **ಶ್ರೀ ಈ ತುಕಾರಾಮ್ ಅವರು** – ನಾರಿಹಳ್ಳ ಪ್ರವಾಹಕ್ಕೆ ಕೊಚ್ಚಿಕೊಂಡು ಹೋಗಿ ಮರಣ ಹೊಂದಿರುವ ವ್ಯಕ್ತಿಯ ಕುಟುಂಬಕ್ಕೆ ವಿಶೇಷ ಪ್ರಕರಣವೆಂದು ಪರಿಗಣಿಸಿ ಪರಿಹಾರವನ್ನು ನೀಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

7) **ಶ್ರೀ ಎಂ.ವೈ. ಪಾಟೀಲ್ ಅವರು** – ಕಲಬುರಗಿ ಜಿಲ್ಲೆಯ ಅಫಜಲಪುರ ಪಟ್ಟಣದಲ್ಲಿರುವ ತಾಲ್ಲೂಕು ಆಸ್ಪತ್ರೆಯಲ್ಲಿ ಕೇವಲ ಹಾಜರಾತಿ ಪುಸ್ತಕದಲ್ಲಿ ಸಹಿ ಮಾಡಿ ಕರ್ತವ್ಯಕ್ಕೆ ಬಾರದೆ ಗೈರು ಹಾಜರಾಗುತ್ತಿರುವ ಹೊರ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಡಿ–ಗ್ರೂಪ್ ಸಿಬ್ಬಂದಿಗಳು ಹಾಗೂ ವೈದ್ಯಾಧಿಕಾರಿಗಳ ವಿರುದ್ಧ ಶಿಸ್ತು ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

8) **ಶ್ರೀ ಕೆ.ಎಸ್. ಲಿಂಗೇಶ್ ಅವರು** – ಹಾಸನ ಜಿಲ್ಲೆಯ ಹಳೇಬೀಡು, ಬೇಲೂರು, ಶ್ರವಣಬೆಳಗೊಳದಲ್ಲಿ ಪ್ರಸ್ತುತ ವರ್ಷ ಹೊಯ್ಸಳ ಉತ್ಸವ ಆಚರಣೆ ಮಾಡುವ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

9) **ಶ್ರೀ ಸಂಜೀವ ಮಠಂದೂರು ಅವರು** – ಪುತ್ತೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಬಂಟ್ವಾಳ ತಾಲ್ಲೂಕಿನ ವಿಟ್ಲ ಪಟ್ಟಣ ಪಂಚಾಯತ್ ಅನ್ನು ಮೇಲ್ದರ್ಜೆಗೇರಿಸುವ ಮೊದಲು ಅರ್ಜಿ ಸಲ್ಲಿಸಿದ ರೈತರ ಕೃಷಿ ಭೂಮಿಗಳನ್ನು ಸಕ್ರಮೀಕರಣಗೊಳಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

10) **ಶ್ರೀ ಎಲ್.ಎ. ರವಿಸುಬ್ರಮಣ್ಯ ಅವರು** – ಶ್ರೀ ಗುರು ರಾಘವೇಂದ್ರ ಸಹಕಾರ ಬ್ಯಾಂಕ್ ಅನ್ನು ಪುನಶ್ಚೇತನಗೊಳಿಸುವ ಬಗ್ಗೆ ಮತ್ತು ಸದರಿ ಸಹಕಾರಿ ಬ್ಯಾಂಕ್ ಹಾಗೂ ಶ್ರೀ ವಸಿಷ್ಠ ಸೌಹಾರ್ದ ಸಹಕಾರಿ ಸಂಸ್ಥೆ (ನಿ)ಯಿಂದ ಸಾಲ ಪಡೆದವರಿಂದ ಸಾಲ ವಸೂಲಾತಿ, ಠೇವಣಿದಾರರಿಗೆ ಹಣ ಹಿಂದಿರುಗಿಸುವ ಯೋಜನೆಗಳ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

11) **ಡಾ. ಕೆ. ಶ್ರೀನಿವಾಸ ಮೂರ್ತಿ ಅವರು** – ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲ್ಲೂಕು ತ್ಯಾಮಗೊಂಡ್ಲು ಹೋಬಳಿ ವ್ಯಾಪ್ತಿಯಲ್ಲಿರುವ ವಿವಿಧ ಗ್ರಾಮಗಳಲ್ಲಿ ಕೈಗಾರಿಕಾ ಪ್ರದೇಶಕ್ಕಾಗಿ ಭೂಸ್ವಾಧೀನಪಡಿಸಿಕೊಂಡಿರುವ ಜಮೀನುಗಳಿಗೆ ನಿಗದಿಪಡಿಸಿರುವ ದರಕ್ಕಿಂತ ಮೂರು ಪಟ್ಟು ಹೆಚ್ಚಿನ ದರಕ್ಕೆ ಕೆ.ಐ.ಎ.ಡಿ.ಬಿ.ರವರು ಮಾರಾಟ ಮಾಡುತ್ತಿರುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಗಮನ ಸೆಳೆಯುವುದು.

12) **ಶ್ರೀ ಲಾಲಾಜಿ ಆರ್. ಮೆಂಡನ್ ಅವರು** – ಕಾಪು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ತೌಕ್ತೆ ಚಂಡಮಾರುತದಿಂದ ಕರಾವಳಿಯ ವಿವಿಧ ಪ್ರದೇಶಗಳಲ್ಲಿ ಉಂಟಾಗಿರುವ ಕಡಲ ಕೊರೆತದಿಂದ ಸಾರ್ವಜನಿಕರಿಗೆ ಹಾಗೂ ಮೀನುಗಾರಿಕಾ ವಸತಿ ಪ್ರದೇಶಕ್ಕೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)